**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 27–11–2018**

## ಪತ್ರಿಕಾ ಆಮಂತ್ರಣ

1. ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ
ಡಾ. ರಾಮ ಮನೋಹರ ಲೋಹಿಯಾ ಸಮಗ್ರ ಸಾಹಿತ್ಯ, ಡಾ. ಚಂದ್ರಶೇಖರ ಕಂಬಾರ ಸಮಗ್ರ ಸಾಹಿತ್ಯ ಮತ್ತು ಮನೆಯಂಗಳದಲ್ಲಿ ವಿಜ್ಞಾನ ಮಾಲಿಕೆ ಕಿರುಪುಸ್ತಕಗಳ ಲೋಕಾರ್ಪಣೆ.

**ಪುಸ್ತಕಗಳ ಲೋಕಾರ್ಪಣೆ:**

ಡಾ. ಜಯಮಾಲಾ ರಾಮಚಂದ್ರ,
ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಹಿರಿಯ ನಾಗರೀಕರ ವಿಕಲಚೇತನರ ಕಲ್ಯಾಣ ಸಚಿವರು

**ಗೌರವ ಉಪಸ್ಥಿತಿ:**
ಡಾ. ಚಂದ್ರಶೇಖರ ಕಂಬಾರ, ಅಧ್ಯಕ್ಷರು, ಕೇಂದ್ರ ಸಾಹಿತ್ಯ ಅಕಾಡೆಮಿ

ದಿನಾಂಕ: 28–11–2018, ಬುಧವಾರ, ಸಮಯ: ಸಂಜೆ 4–00 ಗಂಟೆಗೆ.
ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

**ಸಂಖ್ಯೆ 1354/1454**

# ನವೆಂಬರ್ 29 ರಿಂದ ಡಿಸೆಂಬರ್ 1 ರವರೆಗೆ ಬೆಂಗಳೂರು ಟೆಕ್ ಸಮ್ಮಿಟ್

ಬೆಂಗಳೂರು, ನವೆಂಬರ್ 27, (ಕರ್ನಾಟಕ ವಾರ್ತೆ)

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ಸ್ ಆಫ್ ಇಂಡಿಯಾ ಇವರ ಸಂಯುಕ್ತಾಶ್ರಯದಲ್ಲಿ ನಗರದ ಅರಮನೆ ಮೈದಾನದಲ್ಲಿ ನವೆಂಬರ್ 29 ರಿಂದ ಡಿಸೆಂಬರ್ 1 ರವರೆಗೆ ಹಮ್ಮಿಕೊಂಡಿರುವ ಬೆಂಗಳೂರು ಟೆಕ್ ಸಮ್ಮಿಟ್ ಸಮಾರಂಭವನ್ನು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಉದ್ಘಾಟಿಸುವರು.

ಅಂದು ಬೆಳಿಗ್ಗೆ 10–00 ಗಂಟೆಗೆ ಆರಂಭವಾಗುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಕಾನೂನು ಮತ್ತು ನ್ಯಾಯ ಸಚಿವ ರವಿಶಂಕರ್ ಪ್ರಸಾದ್, ಸಂಪರ್ಕ ಮತ್ತು ರೈಲ್ವೆ ರಾಜ್ಯ ಸಚಿವ ಮನೋಜ್ ಸಿನ್ಹಾ, ನಾನಿನ್ಯತೆ ಮತ್ತು ಪ್ರವಾಸೋದ್ಯಮ, ಕೈಗಾರಿಕಾಭಿವೃದ್ಧಿ ಸಚಿವರು, ಕ್ವೀನ್ಸ್‌ಲ್ಯಾಂಡ್ ಪಾರ್ಲಿಮೆಂಟ್, ಆಸ್ಟ್ರೇಲಿಯಾ ಶ್ರೀಮತಿ ಕೇಟ್ ಜೋನ್ಸ್, ಉಪ ಸಚಿವರು, ವಿದೇಶಾಂಗ ವ್ಯವಹಾರಗಳು ಜೆಕ್ ಗಣರಾಜ್ಯದ ಮಾರ್ಟಿನ್ ತಲ್ಪಾ ಅವರು ಉಪಸ್ಥಿತರಿರುವರು.

ಸಮಾರಂಭದ ಗೌರವಾನ್ವಿತ ಅತಿಥಿಗಳಾಗಿ ಉಪ ಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ, ಸಚಿವರುಗಳಾದ ಆರ್.ವಿ. ದೇಶಪಾಂಡೆ, ಕೆ.ಜೆ. ಜಾರ್ಜ್, ಎನ್.ಹೆಚ್. ಶಿವಶಂಕರರೆಡ್ಡಿ, ಪ್ರಿಯಾಂಕ್ ಖರ್ಗೆ ಸೇರಿದಂತೆ ಅನೇಕ ಗಣ್ಯರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.